# ಪಾಲಕರ ಸಭೆ ಯಶಸ್ವಿ

**ಹಳಿಯಾಳ:** ಕೆಎಲ್‌ಎಸ್‌ವಿಡಿಐಟಿ ಹಳಿಯಾಳದಲ್ಲಿ ಪಾಲಕರ ಸಭೆಯನ್ನು ಅಕ್ಟೋಬರ್ 15ರಂದು ಹಮ್ಮಿಕೊಳ್ಳಲಾಗಿತ್ತು.

ಇಂಜಿನಿಯರಿಂಗ್ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪಾಲಕರನ್ನು ಸ್ವಾಗತಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯವು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ವಿಭಾಗದಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾಗುವ ವಾತಾವರಣವನ್ನು ಮಹಾ ವಿದ್ಯಾಲಯವು ನಿರ್ಮಿಸಿದೆ ಎಂದು ಹೇಳಿದರು. ವಿದ್ಯಾರ್ಥಿ ಗಳ ಕೌಶಲ್ಯ ಅಭಿವೃದ್ಧಿಗೆ ಪಠ್ಯಕ್ರಮದ ಹೊರತಾಗಿ ಆಡ್ ಆನ್ ಕೋರ್ಸ್ ಗಳ ಮೂಲಕ ಕೈಗಾರಿಕಾ ಕ್ಷೇತ್ರವು ಬಯಸುತ್ತಿರುವ ಕೌಶಲ್ಯವನ್ನು ನೀಡಲಾಗುತ್ತಿದೆ ಎಂದು ಹೇಳಿದರು. ಮಹಾವಿದ್ಯಾಲಯವು ವಿದ್ಯಾರ್ಥಿಗಳಿಗೆ ಒದಗಿಸು ರುವ ಸೌಲಭ್ಯಗಳ ಮೌಲ್ಯಮಾಪನ ನಡೆಸಿ ನ್ಯಾಕ್ ತಂಡವು 'ಎ' ಶ್ರೇಣಿ ನೀಡಿದೆ ಎಂದು ಇದೇ ಸಂಧರ್ಭ ದಲ್ಲಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿ ಅಧ್ಯಕ್ಷ ಶ್ರೀ ವಿನಾಯಕ್ ಲೋಕುರ್, ತಂತ್ರಜ್ಞಾನದ ಜೊತೆಗೆ ರಾಷ್ಟ್ರೀಯತೆ ಮತ್ತು ಸಮಾಜಮುಖಿ ಧೋರಣೆ ಬೆಳೆಸಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿ ಗಳಿಗೆ ಜೀವನದ ಗುರಿ ಸ್ಪಷ್ಟ ವಾಗಿರ ಬೇಕು ಮತ್ತು ಈ ನಿಟ್ಟಿನಲ್ಲಿ ಪಾಲಕರ ಮತ್ತು ಮಕ್ಕಳೊಂದಿಗೆ ಸಂವಾದ ತುಂಬಾ ಮುಖ್ಯವಾಗಿದೆ ಎಂದರು. ವಿ ಡಿ ಐ ಟಿ ಕೈಗಾರಿಕಾ ಬಾಂಧವ್ಯಕ್ಕೆ ಒತ್ತು ನೀಡಿದ್ದು, ಹಲವು ಒಪ್ಪಂದ ಮಾಡಿಕೊಂಡಿದೆ. ವಿದ್ಯಾರ್ಥಿಗಳು ಮಹಾ ವಿದ್ಯಾಲಯದ ಸೌಲಭ್ಯ ಉಪಯೋಗಿಸಿಕೊಳ್ಳಲು ಕರೆ ನೀಡಿದರು.

ಸಿಇಟಿಯಲ್ಲಿ ಉತ್ತಮ ಅಂಕ ಪಡೆದು ಮಹಾವಿದ್ಯಾಲಯ ದಲ್ಲಿ ಪ್ರವೇಶ ಪಡೆದುಕೊಂಡಿರುವ ವಿದ್ಯಾರ್ಥಿಗಳಿಗೆ ಪಾಲಕರ ಸಮ್ಮುಖದಲ್ಲಿ ಪುರಸ್ಕರಿಸಲಾಯಿತು. ರಸಾಯನ ಶಾಸ್ತ್ರ ವಿಭಾಗದ ಡಾ. ರವೀಂದ್ರ ಮುನ್ನೊಳ್ಳಿ, ಡಾ ವಿನೋದ್ ನಾಯ್ಕ ಕಾರ್ಯಕ್ರಮ ಸಂಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿ ಹೋಳಿ ನಿರೂಪಿಸಿದರು. ಪ್ರೊ ಸ್ನೇಹಾ ಕುಲಕರ್ಣಿ ಸ್ವಾಗತಿಸಿದರು. ಪ್ರೊ. ಎಸ್.ಡಿ. ಕುಲಕರ್ಣಿ ವಂದಿಸಿದರು. ವಿವಿಧ ಡೀನ್‌ಗಳು, ಮುಖ್ಯಸ್ಥರು , ಅಧಿಕ ಪಾಲಕರು ಸಭೆಯಲ್ಲಿ ಇದ್ದರು.



ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಪಾಲಕರ ಸಭೆಯನ್ನು ಯಶಸ್ವಿಯಾಗಿ ನಡೆಸಲಾಯಿತು.

# ಪಾಲಕರ ಸಭೆ



ಧಾರವಾಡ,ಅ16: ಕೆ.ಎಲ್.ಎಸ್. ವಿ ಡಿ ಐ ಟಿ ಹಳಿಯಾಳದಲ್ಲಿ ಪಾಲಕರ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಇಂಜಿನಿಯರಿಂಗ್ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪಾಲಕರನ್ನು ಸ್ವಾಗತಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯವು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಶೈಕ್ಷಣಿಕ,ಸಾಂಸ್ಕೃತಿಕ ಹಾಗೂ ಕ್ರೀಡಾ ವಿಭಾಗದಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾಗುವ ವಾತಾವರಣವನ್ನು ಮಹಾವಿದ್ಯಾಲಯವು ನಿರ್ಮಿಸಿದೆ ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ್ ಲೋಕುರ್, ತಂತ್ರಜ್ಞಾನದ ಜೊತೆಗೆ ರಾಷ್ಟ್ರೀಯತೆ ಮತ್ತು ಸಮಾಜಮುಖಿ ಧೋರಣೆ ಬೆಳೆಸಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿಗಳಿಗೆ ಜೀವನದ ಗುರಿ ಸ್ಪಷ್ಟವಾಗಿರಬೇಕು ಮತ್ತು ಈ ನಿಟ್ಟಿನಲ್ಲಿ ಪಾಲಕರ ಮತ್ತು ಮಕ್ಕಳೊಂದಿಗೆ ಸಂವಾದ ತುಂಬಾ ಮುಖ್ಯವಾಗಿದೆ ಎಂದರು.

ಸಿ ಇ ಟಿ ಯಲ್ಲಿ ಉತ್ತಮ ಅಂಕ ಪಡೆದು ಮಹಾವಿದ್ಯಾಲಯದಲ್ಲಿ ಪ್ರವೇಶ ಪಡೆದುಕೊಂಡಿರುವ ವಿದ್ಯಾರ್ಥಿಗಳಿಗೆ ಪಾಲಕರ ಸಮ್ಮುಖದಲ್ಲಿ ಪುರಸ್ಕರಿಸಲಾಯಿತು.

ರಸಾಯನ ಶಾಸ್ತ್ರ ವಿಭಾಗದ ಡಾ. ರವೀಂದ್ರ ಮುನ್ನೊಳ್ಳಿ, ಡಾ ವಿನೋದ್ ನಾಯ್ಕ್ ಕಾರ್ಯಕ್ರಮ ಸಂಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿಹೋಳಿ ನಿರೂಪಿಸಿದರು. ಪ್ರೊ ಸ್ನೇಹಾ ಕುಲಕರ್ಣಿ ಸ್ವಾಗತಿಸಿದರು , ಪ್ರೊ ಎಸ್ ಡಿ ಕುಲಕರ್ಣಿ ವಂದಿಸಿದರು.

ವಿವಿಧ ವಿಭಾಗದ ಡೀನ್ ಗಳು, ವಿಭಾಗದ ಮುಖ್ಯಸ್ಥರು ವೇದಿಕೆ ಮೇಲೆ ಉಪಸ್ಥಿತರಿದ್ದರು. ನೂರಕ್ಕೂ ಅಧಿಕ ಪಾಲಕರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಹೊಸದಿಗಂತ 16.10.2023

# ವಿಡಿಐಟಿಯಲ್ಲಿ ಶಿಕ್ಷಣ, ಸಂಸ್ಕೃತಿಗೆ ಪೂರಕ ವಾತಾವರಣ

**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಎಂಜಿನಿಯರಿಂಗ್ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪಾಲಕರ ಸಭೆ ಭಾನುವಾರ ನಡೆಯಿತು.

ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಮಹಾವಿದ್ಯಾಲಯವು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ವಿಭಾಗದಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾಗುವ ವಾತಾವರಣವನ್ನು ಮಹಾವಿದ್ಯಾಲಯ ನಿರ್ಮಿಸಿದೆ. ವಿದ್ಯಾರ್ಥಿಗಳ ಕೌಶಲ್ಯ ಅಭಿವೃದ್ಧಿಗೆ ಪಠ್ಯಕ್ರಮದ ಹೊರತಾಗಿ ಆಡ್ ಆನ್ ಕೋರ್ಸ್‌ಗಳ ಮೂಲಕ ಕೈಗಾರಿಕಾ ಕ್ಷೇತ್ರ ಬಯಸುತ್ತಿರುವ ಕೌಶಲ್ಯ ನೀಡಲಾಗುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ್ ಲೋಕುರ್, ತಂತ್ರಜ್ಞಾನದ ಜೊತೆಗೆ ರಾಷ್ಟ್ರೀಯತೆ ಮತ್ತು ಸಮಾಜಮುಖಿ ಧೋರಣೆ ಬೆಳೆಸಿಕೊಳ್ಳಬೇಕು ಎಂದರು.

ಇದೇ ವೇಳೆ ಸಿಇಟಿಯಲ್ಲಿ ಉತ್ತಮ ಅಂಕ ಪಡೆದು ಮಹಾವಿದ್ಯಾಲಯದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗನ್ನು ಪಾಲಕರ ಸಮ್ಮುಖದಲ್ಲಿ ಪುರಸ್ಕರಿಸಲಾಯಿತು.

ವಿವಿಧ ವಿಭಾಗದ ಡೀನ್‌ಗಳು, ವಿಭಾಗದ ಮುಖ್ಯಸ್ಥರು ವೇದಿಕೆಯಲ್ಲಿದ್ದರು. ರಸಾಯನ ಶಾಸ್ತ್ರ ವಿಭಾಗದ ಡಾ. ರವೀಂದ್ರ ಮುನ್ನೊಳ್ಳಿ, ಡಾ. ವಿನೋದ್ ನಾಯ್ಕ್ ಕಾರ್ಯಕ್ರಮ ಸಂಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿ ಹೋಳಿ ನಿರೂಪಿಸಿದರು. ಪ್ರೊ. ಸ್ನೇಹಾ ಕುಲಕರ್ಣಿ ಸ್ವಾಗತಿಸಿದರು, ಪ್ರೊ. ಎಸ್.ಡಿ. ಕುಲಕರ್ಣಿ ವಂದಿಸಿದರು.



> **ಜೀವನದ ಗುರಿ ಸ್ಪಷ್ಟವಾಗಿರಬೇಕು ಮತ್ತು ಈ ನಿಟ್ಟಿನಲ್ಲಿ ಪಾಲಕರ ಮತ್ತು ಮಕ್ಕಳೊಂದಿಗೆ ಸಂವಾದ ತುಂಬಾ ಮುಖ್ಯವಾಗಿದೆ ವಿಡಿಐಟಿ ಕೈಗಾರಿಕಾ ಬಾಂಧವ್ಯಕ್ಕೆ ಒತ್ತು ನೀಡಿದ್ದು, ಹಲವು ಒಪ್ಪಂದಗಳನ್ನು ಮಾಡಿಕೊಂಡಿದೆ. ವಿದ್ಯಾರ್ಥಿಗಳು ಮಹಾವಿದ್ಯಾಲಯದ ಸೌಲಭ್ಯ ಉಪಯೋಗಿಸಿಕೊಳ್ಳಬೇಕು.**
>
> ■ **ವಿನಾಯಕ್ ಲೋಕುರ್, ಆಡಳಿತ ಮಂಡಳಿ ಅಧ್ಯಕ್ಷ**

